ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
2ನೇ ಮಹಡಿ, ಕೆ.ಹೆಚ್.ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು-560 009 ಇ-ಮೇಲ್ sbmkarnataka1@gmail.com,

**ಕಡತ ಸಂಖ್ಯೆ:** RDWSD/56/SBM-G/WASH-C/2021 ದಿನಾಂಕ 14.06.2023

# ಪ್ರಕಟಣೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಜಲ ಜೀವನ ಮಿಷನ್ ಯೋಜನೆಯಡಿ ರಾಜ್ಯ ಕಛೇರಿಗೆ UNICEF ಸಂಸ್ಥೆಯ ವತಿಯಿಂದ ಕೆಳಕಂಡ ತಾತ್ಕಾಲಿಕ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ಸಮಾಲೋಚಕರನ್ನು ನೇಮಿಸಿಕೊಳ್ಳಲು ಅರ್ಜಿ ಕರೆಯಲಾಗಿದೆ.

ಹುದ್ದೆಗಳ ವಿವರ, ವಿದ್ಯಾರ್ಹತೆ ಹಾಗೂ ಕಾರ್ಯಾನುಭವದ ವಿವರಗಳನ್ನು ಕೆಳಕಂಡಂತೆ ನೀಡಲಾಗಿದೆ.

| ಕ್ರ. ಸಂ. | ಹುದ್ದೆಯ ವಿವರ | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ ಮತ್ತು ಅನುಭವ | ಮಾಸಿಕ ಸಂಭಾವನೆ |
|---|---|---|---|---|
| 01 | **Integrated Water Resource Management Consultant** | 01 | • The candidate should have postgraduate degree in water resource management/Civil Engineering/Environmental engineering/Public Health Engineering or comparable degrees. with at-least 5 years of experience in rural water & sanitation programmes<br>• He/she should have proven work experience in integrated water resource management, watershed management programmers & Water Audit<br>• He/she should have at-least for 3yrs in any of GoI's Water programmes<br>• He/she should have a knowledge on Water Gem&GISsoftwares<br>• He/she should be fluent in Kannada & English<br>• He/she should have computer skills-MS Windows, MS Office applications<br>• Experience in Jal Jeevan Mission will be an added advantage | Rs.60,000/- to Rs.70,000/- |

1) **ಗುತ್ತಿಗೆಯ ಅಥವಾ ಹೊರಗುತ್ತಿಗೆ ಅವಧಿ:** ಮೇಲಿನ ಹುದ್ದೆ ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿದ್ದು, ಒಂದು ವರ್ಷದ ಅವಧಿಗೆ ಹೊರಗುತ್ತಿಗೆಯ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು ನಂತರ ಕಾಲಕಾಲಕ್ಕೆ ಅವರ ಕಾರ್ಯಕ್ಷಮತೆಯನ್ನು ಪರಿಶೀಲಿಸಿ ಮತ್ತು ಅಗತ್ಯಕ್ಕೆ ಅನುಗುಣವಾಗಿ ನವೀಕರಿಸಲಾಗುವುದು. ಒಂದೊಮ್ಮೆ ಅಭ್ಯರ್ಥಿಯ ಕಾರ್ಯಕ್ಷಮತೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿದ್ದರೆ ಅಂತಹ ಅಭ್ಯರ್ಥಿಗಳ ಕರಾರು ಒಪ್ಪಂದವನ್ನು ಒಂದು ತಿಂಗಳ ನೋಟೀಸ್ ನೀಡಿ ರದ್ದುಪಡಿಸಲಾಗುವುದು.
2) **ವಯೋಮಾನ:** ಪ್ರಕಟಣೆ ಹೊರಡಿಸಿದ ದಿನಾಂಕಕ್ಕೆ 45 ವರ್ಷಗಳು ಮೀರಿರಬಾರದು.
3) ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ತುಂಬಿ, ವಯಸ್ಸಿನ ದೃಢೀಕರಣ, ವಿದ್ಯಾರ್ಹತೆ, ಅನುಭವ, ಪ್ರಮುಖ ಸಾಮರ್ಥ್ಯಗಳು, (Resume) ಅರ್ಜಿಯನ್ನು **ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕೆ.ಹೆಚ್.ಬಿ ಕಟ್ಟಡ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 5600-009 ಈ ವಿಳಾಸಕ್ಕೆ ಅರ್ಜಿಯ ಹಾರ್ಡ್‌ಪ್ರತಿಯನ್ನು ದಿನಾಂಕ: 30.06.2023ರ ಸಂಜೆ 5:30 ಗಂಟೆಯೊಳಗೆ ಸಲ್ಲಿಸಬೇಕು. ನಂತರ ಬಂದಂತಹ ಯಾವುದೇ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. (ಅರ್ಜಿಯ ನಮೂನೆ & ToR ಪ್ರತಿ RDPR website:** https://rdpr.karnataka.gov.in **ಮತ್ತು** https://swachhamevajayate.org **(ನೇಮಕಾತಿ ಲಿಂಕ್)ನಲ್ಲಿ ಲಭ್ಯವಿರುತ್ತದೆ).**
4) ಸ್ನಾತಕ / ಸ್ನಾತಕೋತ್ತರ ಪದವಿಯನ್ನು ದೂರ ಶಿಕ್ಷಣ ಮುಖಾಂತರ ಪಡೆದಿದ್ದರೆ, ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5) ಆಯ್ಕೆಯಾದ ಅಭ್ಯರ್ಥಿಯು ಹೊರಗುತ್ತಿಗೆ ಸಂಸ್ಥೆಯೊಂದಿಗೆ ನಿಗದಿತ ನಮೂನೆಯಲ್ಲಿ ಕರಾರು ಒಪ್ಪಂದವನ್ನು ಮಾಡಿಕೊಳ್ಳಬೇಕು ಹಾಗೂ ಕಾರ್ಯಾನುಭವದ ಆಧಾರದ ಮೇಲೆ ಮಾಸಿಕ ಸಮಾಲೋಚನಾ ಶುಲ್ಕ ನಿಗದಿಪಡಿಸಲಾಗುವುದು.

6) ಕರಾರು ಒಪ್ಪಂದ ಮಾಡಿಕೊಂಡ ಅಭ್ಯರ್ಥಿಗೆ ಇಲಾಖೆಯಲ್ಲಿನ ಯಾವುದೇ ಹುದ್ದೆಗಳಲ್ಲಿ ವಿಲೀನಗೊಳ್ಳಲು / ಮುಂದುವರೆಯಲು ಯಾವುದೇ ಹಕ್ಕು ಇರುವುದಿಲ್ಲ.

7) ಕಿರುಪಟ್ಟಿ ಮಾಡಿದ ಅಭ್ಯರ್ಥಿಗಳಿಗೆ (Shortlisted candidates) ಅವರುಗಳಿಗೆ ಮಾತ್ರ ದೂರವಾಣಿ ಮುಖಾಂತರ ತಿಳಿಸಲಾಗುವುದು.

೮) **ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನವನ್ನು ಕೇಂದ್ರ ಕಛೇರಿಯಲ್ಲಿ ನೇರ ಸಂದರ್ಶನ ಅಥವಾ ವಿಡಿಯೋ ಸಂವಾದದ ಮೂಲಕ ನಡೆಸಲಿದ್ದು, ನಿಗದಿಪಡಿಸಿದ ದಿನಾಂಕ ಮತ್ತು ವೇಳೆಯಲ್ಲಿ ಹಾಜರಾಗುವುದು**.

೯) ನೇಮಕಾತಿಯನ್ನು ಪೂರ್ಣವಾಗಿ ಮತ್ತು ಭಾಗಶಃ ರದ್ದು ಮಾಡುವ/ ಮುಂದೂಡುವ/ ಬದಲಾವಣೆ ಮಾಡುವ ಹಕ್ಕನ್ನು ಇಲಾಖೆಯು ಹೊಂದಿರುತ್ತದೆ.

ಸಹಿ/-

ಆಯುಕ್ತರು
ಗ್ರಾ ಕು ನೀ & ನೈ ಇಲಾಖೆ